2) ಅಂಥ ಪ್ರದೇಶದಲ್ಲಿನ ಜನಸಂಖ್ಯೆಯ ಸಾಂದ್ರತೆಯು ಒಂದು ಚದರ ಕಿಲೋಮೀಟರ್ ಪ್ರದೇಶಕ್ಕೆ ಒಂದು ಸಾವಿರದ ಐನೂರು ನಿವಾಸಿಗಳಿಗಿಂತ ಕಡಿಮೆಯಿಲ್ಲದ ಹೊರತು;

3) ಹಿಂದಿನ ನಿಕಟಪೂರ್ವ ಜನಗಣತಿಯಲ್ಲಿ ಅಂಥ ಪ್ರದೇಶದಿಂದ ಸ್ಥಳೀಯ ಆಡಳಿತಕ್ಕಾಗಿ ತೆರಿಗೆ ಮತ್ತು ತೆರಿಗೆಯಿಲ್ಲದ ಇತರ ಸಂಪನ್ಮೂಲಗಳಿಂದ ಉತ್ಪಾದಿತವಾದ ರಾಜಸ್ವ ವಾರ್ಷಿಕ ಒಂಭತ್ತು ಲಕ್ಷ ಅಥವಾ ವಾರ್ಷಿಕ ತಲಾ ಬಬ್ಬನಿಗೆ ನಲವತ್ತೈದು ರೂ ಗಳ ದರದಂತೆ ಲೆಕ್ಕ ಹಾಕಲಾದ ಮೊತ್ತ ಇವೆರಡರಲ್ಲಿ ಯಾವುದು ಹೆಚ್ಚೋ ಆ ಮೊತ್ತಕ್ಕಿಂತ ಕಡಿಮೆಯಿರದ ಹೊರತು;

4) ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗದ ಶೇಕಡವಾರು ಒಟ್ಟು ಉದ್ಯೋಗದ ಶೇಕಡ ಐವತ್ತಕ್ಕಿಂತ ಕಡಿಮೆಯಿಲ್ಲದಿದ್ದ ಹೊರತು.

ತೊಗರಿ ಬೆಳೆ ಹಾನಿಗೆ ಪರಿಹಾರ

44(202); ಡಾ॥ ಉಮೇಶ್ ಜಿ. ಜಾಧವ್

ಅ) ಪ್ರಸ್ತಕ ಸಾಲಿನಲ್ಲಿ ಗುಲ್ಬರ್ಗ ಜಿಲ್ಲೆಯ ಚಿಂಚೋಳಿ ತಾಲ್ಲೂಕಿನಲ್ಲಿ ತೊಗರಿ ಬೆಳೆಯು ಹಾನಿಯಾಗಿದ್ದು, ಇದರಿಂದಾಗಿ ರೈತರು ಬಹಳ ನಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ರೈತರಿಗೆ ಪರಿಹಾರ ನೀಡಲು ತೆಗೆದುಕೊಂಡ ಕ್ರಮವೇನು (ವಿವರ ನೀಡುವುದು)

ಶ್ರೀ ಕೃಷ್ಣ ಭೈರೇಗೌಡ (ಕೃಷಿ ರಾಜ್ಯ ಸಚಿವರು)

ಅ) 2013ರ ಡಿಸೆಂಬರ್ ಮಾಹೆಯಲ್ಲಿ ಗುಲ್ಬರ್ಗ ಜಿಲ್ಲೆಯ ಚಿಂಚೋಳಿ ತಾಲ್ಲೂಕಿನಲ್ಲಿ ಅತಿ ತಂಪಾದ ಹವೆ ಹಾಗೂ ಇಬ್ಬನಿ ಬಿದ್ದು ಮುಂಗಾರು ಹಂಗಾಮಿನ ತೊಗರಿ ಬೆಳೆಗೆ ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಕೃಷಿ ವಿಶ್ವ ವಿದ್ಯಾನಿಲಯ, ರಾಯಚೂರು ವತಿಯಿಂದ ವಿಜ್ಞಾನಿಗಳ ತಂಡ ಚಿಂಚೋಳಿ ತಾಲ್ಲೂಕಿನಲ್ಲಿ ಪ್ರವಾಸ ಕೈಗೊಂಡು ಬೆಳೆಯನ್ನು ಪರೀಕ್ಷಿಸಿ ವರದಿಯನ್ನು ಸಲ್ಲಿಸಿರುತ್ತಾರೆ. ಅದರನ್ವಯ, ಈಗಾಗಲೇ ಕೃಷಿ

ಹಾಗೂ ಕಂದಾಯ ಇಲಾಖೆಯ ಜಂಟಿ ಸಮೀಕ್ಷೆ ಪ್ರಗತಿಯಲ್ಲಿರುತ್ತದೆ. ಸಮೀಕ್ಷೆ ಮುಗಿದ ನಂತರ ಬೆಳೆ ನಷ್ಟ ಹೊಂದ ರೈತರಿಗೆ ಪರಿಹಾರ ನೀಡುವ ಕ್ರಮ ಕೈಗೊಳ್ಳಲಾಗುವುದು.

ಬೀದರ ಜಿಲ್ಲೆಗೆ 2011 ನೇ ಸಾಲಿನ ಶರದಪವರ್ ಪ್ಯಾಕೇಜ ಅನುದಾನ

45(208); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ

ಅ) ಬೀದರ್ ಜಿಲ್ಲೆಗೆ 2011–12ನೇ ಸಾಲಿಗೆ ಶರದಪವಾರ್ ಪ್ಯಾಕೇಜ್ ಯೋಜನೆಯಡಿಯಲ್ಲಿ ಎಷ್ಟು ಅನುದಾನ ಪಡೆಯಲು ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ; ಎಷ್ಟು ಅನುದಾನ ಬಿಡುಗಡೆಯಾಗಿದೆ;

ಆ) ಈ ಯೋಜನೆಯಡಿಯಲ್ಲಿ ಜಿಲ್ಲೆಯಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ತೆಗೆದುಕೊಳ್ಳಲಾಗಿದೆ (ವಿವರ ನೀಡುವುದು);

ಇ) ಈ ಪ್ಯಾಕೇಜ್‌ಗೆ ಎಷ್ಟು ಅನುದಾನ ಘೋಷಿಸಲಾಗಿದೆ; ಘೋಷಿಸಿದ ಸಂಪೂರ್ಣ ಅನುದಾನವನ್ನು ಈ ವರ್ಷದಲ್ಲಿಯೇ ಪಡೆದು ಉಪಯೋಗಿಸಲು ತೀರ್ಮಾನವನ್ನು ತೆಗೆದುಕೊಳ್ಳಲಾಗಿದೆಯೇ?

ಶ್ರೀ ಕೃಷ್ಣ ಭೈರೇಗೌಡ್ (ಕೃಷಿ ರಾಜ್ಯ ಸಚಿವರು)

ಅ) ಬೀದರ್ ಜಿಲ್ಲೆಯ ಸಮಗ್ರ ಕೃಷಿ ಅಭಿವೃದ್ಧಿಗಾಗಿ ವಿಶೇಷ ಪ್ಯಾಕೇಜ್‌ಗೆ ಒಟ್ಟಾರೆ ₹ 500.00 ಕೋಟಿಗೆ ಭಾರತ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. ಈ ಯೋಜನೆಯ ಅನುಷ್ಠಾನಕ್ಕಾಗಿ 2011–12ನೇ ಸಾಲಿನಲ್ಲಿ ಭಾರತ ಸರ್ಕಾರದಿಂದ ಪ್ರತ್ಯೇಕ ಅನುದಾನ ಬಿಡುಗಡೆಯಾಗಿರುವುದಿಲ್ಲ.

ಆ) ಬೀದರ್ ಜಿಲ್ಲೆಯ ಸಮಗ್ರ ಕೃಷಿ ಅಭಿವೃದ್ಧಿಗಾಗಿ ವಿಶೇಷ ಪ್ಯಾಕೇಜ್ ಯೋಜನೆ ಅನುಷ್ಠಾನಕ್ಕಾಗಿ ಕೇಂದ್ರ ಸರ್ಕಾರದಿಂದ ಪ್ರತ್ಯೇಕವಾಗಿ ಅನುದಾನ ಬಿಡುಗಡೆಯಾಗಿರುವುದಿಲ್ಲ. ಆದರೆ, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ, ವಿವಿಧ ಇಲಾಖೆಗಳು ಬೀದರ್ ಜಿಲ್ಲೆಯಲ್ಲಿ, 2011–12 ರಿಂದ 2013–14ನೇ ಸಾಲಿನವರೆಗೆ ₹ 5625.71 ಲಕ್ಷದ ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗಿರುತ್ತದೆ. ಈ